## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೀದರ್ ವಾಯುಪಡೆಯ ನಾಗರಿಕ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚವನ್ನು ಭರಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತದೊದಿಗೆ ಮಾಡಿಕೊಂಡಿರುವ ಒಪ್ಪಂದ ದಿನಾಂಕ:30.01.2020.
2. ಮುಖ್ಯ ಹಣಕಾಸು ಅಧಿಕಾರಿ, ಜಿ.ಹೆಚ್.ಐ.ಎ.ಎಲ್ ಇವರ ಪತ್ರ ಸಂಖ್ಯೆ: GHIAL/ F&A/ Bidar/ 2021-22-01, ದಿನಾಂಕ:23.08.2021.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರಲ್ಲಿ ಬೀದರ್ ವಾಯು ಪಡೆಯ ನಾಗರಿಕ ವಿಮಾನ ನಿಲ್ದಾಣ ಕಾರ್ಯಾಚರಣೆ ಹಾಗೂ ನಿರ್ವಹಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಪರವಾಗಿ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್ ಹಾಗೂ ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತದೊದಿಗೆ ಒಪ್ಪಂದವನ್ನು ಮಾಡಿಕೊಳ್ಳಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ: 23.08.2021ರ ಪತ್ರದಲ್ಲಿ ಬೀದರ್ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಲಿಮಿಟೆಡ್ ಇವರೊಂದಿಗೆ ದಿನಾಂಕ:30.01.2020ರಂದು ಮಾಡಿಕೊಂಂಡಿರುವ ಒಪ್ಪಂದದನ್ವಯ ಬೀದರ್ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚವನ್ನು ರಾಜ್ಯ ಸರ್ಕಾರವು ಭರಿಸಬೇಕಾಗಿದ್ದು, ಸಂಸ್ಥೆಯು 2020-21ನೇ ಸಾಲಿನ ಬಾಕಿ ಮೊತ್ತ ರೂ.153.96ಲಕ್ಷಗಳನ್ನು ಹಾಗೂ 2021-22ನೇ ಸಾಲಿನ ಮೊದಲನೇ ಮತ್ತು ಎರಡನೇ ತ್ರೈಮಾಸಿಕದ ಮುಂಗಡ ರೂ.252.50ಲಕ್ಷಗಳನ್ನು ಪಾವತಿಸುವಂತೆ ಕೋರಿರುತ್ತಾರೆ.

3. ಪ್ರಸ್ತಾವನೆಯನ್ನು ಕೂಲಂಕುಶವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ.

### ಸರ್ಕಾರದ ಆದೇಶ ಸಂಖ್ಯೆ:ಮೂಅಇ 93 ರಾಅವಿ 2020
### ಬೆಂಗಳೂರು, ದಿನಾಂಕ:29.09.2021

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೀದರ್ ವಾಯು ಪಡೆಯ ನಾಗರಿಕ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣೆಯ ಕುರಿತ ಒಪ್ಪಂದದನ್ವಯ 2021-22ನೇ ಸಾಲಿನ ಮೊದಲನೇ ಮತ್ತು ಎರಡನೇ ತ್ರೈಮಾಸಿಕದ ಮುಂಗಡ ರೂ.2,52,50,000/- (ಎರಡು ಕೋಟಿ ಐವತ್ತೆರಡು ಲಕ್ಷದ, ಐವತ್ತು ಸಾವಿರ ರೂಪಾಯಿಗಳು ಮಾತ್ರ)ಗಳಲ್ಲಿ ರೂ.1,00,00,000/- (ಒಂದು ಕೋಟಿಗಳು ಮಾತ್ರ)ಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ ನಿಯಮಿತದ ಮೂಲಕ ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತಕ್ಕೆ ಭರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

2. ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "3451-00-090-1-11-071" Development of Minor Airports -Building Expenses ರಡಿಯಲ್ಲಿ 2021-22ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು,

...2

3. ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ., ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ತೆಗೆಯಲು ಅನುಮತಿಸಿದೆ.

4. ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2021, ದಿನಾಂಕ:05.04.2021 ರಲ್ಲಿನ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಎನ್. ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು
ಮತ್ತು ಒಳನಾಡು ಜಲಸಾರಿಗೆ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಆಡಿಟ್-1,2,3A & E), ಪ್ರಧಾನ ಮಹಾಲೇಖಪಾಲರ ಕಛೇರಿ, ಎಎಡಿ ಸೆಕ್ಷನ್, ಕೆ.ಪಿ.ಎಸ್.ಸಿ.ಕಚೇರಿ ಎದುರು, ಬೆಂಗಳೂರು,
2. ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ, ಬೀದರ್
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
4. ಮುಖ್ಯ ಹಣಕಾಸು ಅಧಿಕಾರಿ, ಜಿ.ಹಚ್.ಐ.ಎ.ಎಲ್, ಹೈದ್ರಾಬಾದ್.
5. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
6. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
7. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಇಲಾಖೆ, ಬೆಂಗಳೂರು.
8. ನಿರ್ದೇಶಕರು, PM & I ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜಭವನ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1,) ವಿಧಾನಸೌಧ, ಬೆಂಗಳೂರು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ, ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.